



ಅರುಣ ಪಿ. ಭಟ್ಟ


## ವಾರಭವಿಷ್ಯ:16.02.2023ರಿಂದ 22.02.2023ರವರೆಗೆ




ವಾರದ ಶುರುವಿನಲ್ಲಿ ಉತ್ತಮವಾದ ಹಣದ ಹರಿವು ಇರುತ್ತದೆ. ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಗತಿ. ಹೆಚ್ಚಿನ ಹಣ ಖರ್ಚಾಗಲಿದೆ. ಇದರಿಂದ ಆತಂಕಕ್ಕೆ ಗುರಿಯಾಗುತ್ತೀರಿ. ಶತ್ರುಗಳ ಉಪಟಳ ಹೆಚ್ಚಾಗಲಿದೆ. ಇದರಿಂದ ಮಾನಸಿಕ ಆತಂಕಕ್ಕೆ ಗುರಿಯಾಗುತ್ತೀರಿ. ವಾರದ ಕೊನೆ ಮೂರು ದಿನ ಅನುಕೂಲ ಸನ್ನಿವೇಶ ಇದೆ. ಶುಭದಿನ: 18. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.




ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ನಿಮ್ಮ ಆರೋಗ್ಯ ಉತ್ತಮವಾಗಿ ಇರಲಿದೆ. ಮನೆಯಲ್ಲಿ ಸಂತೋಷದ ವಾತಾವರಣ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ನಿರೀಕ್ಷೆ ಮಾಡಿದ್ದಕ್ಕಿಂತ ಹೆಚ್ಚಿನ ಅನುಕೂಲ ನಿಮಗೆ ಒದಗಿಬರಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನೀವು ಹಾಕಿದ್ದ ಶ್ರಮಕ್ಕೆ ತಕ್ಕ ಫಲ ದೊರೆಯಲಿದೆ. ಮಕ್ಕಳ ಏಳ್ಗೆಯಿಂದ ಹೆಮ್ಮೆ ಮೂಡುತ್ತದೆ. ಶುಭದಿನ: 20. ಶ್ರೀರಾಮರಕ್ಷಾಸ್ತೋತ್ರ ಪಠಿಸಿರಿ.





ವಾರದ ಆರಂಭದಲ್ಲೇ ಮನೆಯಲ್ಲಿ ದೇವತಾ ಆರಾಧನೆ ಕಾರ್ಯಕ್ರಮದ ಸಾಧ್ಯತೆ ಇದೆ. ಸಹೋದರರು ಸಹ ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಸಾಮಾಜಿಕ ಕಾರ್ಯಗಳಲ್ಲಿ ಚಟುವಟಿಕೆಯಿಂದ ಪಾಲ್ಗೊಳ್ಳಲಿದ್ದೀರಿ. ಅಗತ್ಯ ಇರುವವರಿಗೆ ನೆರವು ಕೂಡ ನೀಡಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ ಇದೆ. ಮನೆಯ ವಿಚಾರದಲ್ಲಿ ಗಮನಹರಿಸಬೇಕಾಗುತ್ತದೆ. ಶುಭದಿನ: 19. ಸೌಂದರ್ಯ ಲಹರಿ ಪಠಿಸಿರಿ.





ಉದ್ಯೋಗಕ್ಕೆ ಹೊರತಾದ ಕೆಲಸಗಳನ್ನು ಪೂರೈಸುವುದಕ್ಕೆ ಸಮಯ ನೀಡಬೇಕಾಗುತ್ತದೆ. ಹಣ ಹೂಡಿಕೆಯಲ್ಲಿ ಉತ್ತಮ ಪ್ರಗತಿ ಇದೆ. ಈ ಅವಧಿಯಲ್ಲಿ ಹೆಚ್ಚು ಹಣ ಖರ್ಚಾಗುತ್ತದೆ. ಉದ್ಯೋಗ ಸ್ಥಳದಲ್ಲಿ ಅಂದುಕೊಂಡ ಸ್ಥಾನಮಾನ ಪಡೆಯಲು ಅವಕಾಶ ದೊರೆಯುತ್ತದೆ. ಕಾನೂನು ವಿಚಾರಕ್ಕೆ ಸಂಬಂಧಿಸಿದ ಜವಾಬ್ದಾರಿಗಳನ್ನು ಪೂರೈಸಲು ಗಮನ ನೀಡಬೇಕಾಗುತ್ತದೆ. ಶುಭದಿನ: 22. ಲಿಂಗಾಷ್ಟಕ ಪಠಿಸಿರಿ.




ದಾಂಪತ್ಯ ಜೀವನ ಸಂತೋಷವಾಗಿ ಇರುತ್ತದೆ. ಸಂಬಂಧದಲ್ಲಿ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ವ್ಯಾಪಾರಿಗಳು, ಉದ್ಯಮಿಗಳು ಬಹುಕಾಲದ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ಇದರಿಂದ ಭವಿಷ್ಯದಲ್ಲಿ ದೊಡ್ಡ ಮಟ್ಟದ ಉಪಯೋಗ ಆಗಲಿದೆ. ವಾರದ ಮಧ್ಯ ಭಾಗದಲ್ಲಿ ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ಆರೋಗ್ಯದಲ್ಲಿ ಏರುಪೇರಾಗಬಹುದು. ಶುಭದಿನ: 17. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಬಹಳ ಶ್ರಮ ಪಡುತ್ತೀರಿ. ಕೆಲಸ ಆಗಲಿಲ್ಲ ಅಂದರೂ ನಿಮ್ಮ ಆತ್ಮವಿಶ್ವಾಸದಲ್ಲಿ ಯಾವುದೇ ಕುಂದುಂಟಾಗುವುದಿಲ್ಲ. ಪರಿಚಯಸ್ಥರ ಆಹ್ವಾನದ ಮೇರೆಗೆ ಕಾರ್ಯಕ್ರಮದಲ್ಲಿ ಭಾಗಿ ಆಗಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಕರ್ತವ್ಯವನ್ನು ಪೂರ್ಣಗೊಳಿಸುವ ಕಡೆಗೆ ಹೆಚ್ಚಿನ ಗಮನ ವಹಿಸಲಿದ್ದೀರಿ. ಶುಭದಿನ: 17. ವಿಷ್ಣು ಸಹಸ್ರನಾಮ ಪಠಿಸಿರಿ.





ಹಣಕಾಸಿನ ಹರಿವು ಹೆಚ್ಚಾಗಲಿದೆ. ಸಾಮಾಜಿಕವಾಗಿ ಸ್ಥಾನಮಾನ ಕೂಡ ಹೆಚ್ಚಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಏಳ್ಗೆ ಇದೆ. ತಾಂತ್ರಿಕ ಕೌಶಲ, ಜ್ಞಾನ ಹೆಚ್ಚಿಸಿಕೊಳ್ಳುವುದಕ್ಕೆ ಅವಕಾಶ ದೊರೆಯಲಿದೆ. ವೈವಾಹಿಕ ಜೀವನದಲ್ಲಿ ಸಂತೋಷ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಬಹಳ ಹತ್ತಿರದ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಶುಭದಿನ: 16. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ವಾರದ ಆರಂಭದಲ್ಲಿ ಒತ್ತಡ ಉಂಟಾಗಬಹುದು. ನಿಮ್ಮ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಇದರಿಂದ ನಿಮ್ಮ ಬಡ್ತಿಗೆ ದಾರಿ ಗೋಚರಿಸಲಿದೆ. ಮೊದಲ ಮೂರು ದಿನ ಆರೋಗ್ಯ ಉತ್ತಮವಾಗಿರುತ್ತದೆ. ಸಂಗಾತಿಗೆ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಸಂಬಂಧದಲ್ಲಿ ಸುಧಾರಣೆ ಕಾಣಿಸಲಿದೆ. ನಿಮ್ಮ ಆರೋಗ್ಯದಲ್ಲಿ ಸ್ವಲ್ಪ ಸಮಸ್ಯೆ ಆಗಬಹುದು. ಶುಭದಿನ: 21. ಹನುಮಾನ್ ಚಾಲಿಸ್ ಪಠಿಸಿರಿ.





ವಾರದ ಶುರುವಿನಲ್ಲಿ ಕೆಲವು ಗಂಭೀರ ವಿಚಾರಗಳಲ್ಲಿ ಪ್ರಗತಿ ಇದೆ. ಉದ್ಯಮದಲ್ಲಿ ನಿರಂತರವಾದ ಪ್ರಗತಿ ಇದೆ. ಇದರ ಅನುಕೂಲ ಪಡೆಯಲು ಪ್ರಯತ್ನಿಸಿ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನಿಮ್ಮ ಕೆಲಸವನ್ನು ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಯಶಸ್ವಿಯಾಗುತ್ತೀರಿ. ಶುಭದಿನ: 19. ಆದಿತ್ಯ ಹೃದಯ ಪಠಿಸಿರಿ.




ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಆದರೆ ಬಹಳ ಶ್ರಮಪಟ್ಟು, ಯಶಸ್ಸು ಪಡೆಯಬೇಕಾಗುತ್ತದೆ. ಸಂವಹನದ ಕೊರತೆ ಎದ್ದು ಕಾಣಲಿದೆ. ವ್ಯಾಪಾರಿಗಳು, ಉದ್ಯಮಿಗಳಿಗೆ ಹಲವು ಬಗೆಯಲ್ಲಿ ಸವಾಲುಗಳು ಎದುರಾಗಲಿವೆ. ಈ ಅವಧಿಯಲ್ಲಿ ಹೆಚ್ಚು ಹಣ ಖರ್ಚು ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯ ಕಾಣಿಸಿಕೊಳ್ಳಲಿದೆ. ಶುಭದಿನ: 16. ಕಾಲಭೈರವನ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಜವಾಬ್ದಾರಿಯನ್ನು ಪೂರೈಸಲು ಸಮಯವನ್ನು ಮೀಸಲಿಡಬೇಕಾಗುತ್ತದೆ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಹೆಚ್ಚಳ ಆಗಲಿದೆ. ಜವಾಬ್ದಾರಿಗಳು ಕೂಡ ಜಾಸ್ತಿ ಆಗಲಿವೆ. ಆದಾಯ ಮೂಲಗಳಿಂದ ಹೆಚ್ಚು ಅನುಕೂಲ ಇದೆ. ನೀವು ಹಾಕಿದ ಶ್ರಮಕ್ಕೆ ತಕ್ಕ ಫಲ ದೊರೆಯುವುದೇ ಎಂದು ಇತರರ ಜತೆಗೂಡಿ ನಿರೀಕ್ಷೆ ಮಾಡಲಿದ್ದೀರಿ. ಶುಭದಿನ: 20. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಭವಿಷ್ಯದ ಬಗ್ಗೆ ಯೋಚಿಸಲು ವಾರದ ಶುರುವಿನಲ್ಲಿ ಹೆಚ್ಚಿನ ಸಮಯ ನೀಡುತ್ತೀರಿ. ದೂರ ಪ್ರದೇಶಗಳಿಗೆ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಪ್ರಯತ್ನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಗಮನ ನೀಡುತ್ತೀರಿ. ಆರೋಗ್ಯ ತೊಂದರೆ ಆದರೆ ವೈದ್ಯರ ಸಲಹೆ ಪಡೆದುಕೊಳ್ಳಿ. ಹಣ ಹೂಡಿಕೆಯಲ್ಲಿ ಲಾಭವಾಗುವ ಸಾಧ್ಯತೆ ಇದೆ. ಶುಭದಿನ: 19. ದತ್ತಗುರು ಚರಿತ್ರೆ ಪಠಿಸಿರಿ.